**ದಿನಾಂಕ: 04.06.2022 ರಂದು ಮಧ್ಯಾಹ್ನ 3-30ಕ್ಕೆ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-178 (ಸಾರಕ್ಕಿ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-178ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ, ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

### : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 178ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಬೆಸ್ಕಾಂ |
| ಸದಸ್ಯರುಗಳು | ತೋಟಗಾರಿಕಾ ಇಲಾಖೆಯ ಅಧಿಕಾರಿಗಳು |
| ಸದಸ್ಯರುಗಳು | ಅರಣ್ಯ ಇಲಾಖೆ ಅಧಿಕಾರಿಗಳು |
| ಸದಸ್ಯರುಗಳು | ಕಂದಾಯ ಪರಿವೀಕ್ಷಕರು |
| ಸದಸ್ಯರುಗಳು | ಬಿಡಬ್ಲ್ಯೂಎಸ್‌ಎಸ್‌ಬಿ ಅಧಿಕಾರಿಗಳು |
| ಸದಸ್ಯರುಗಳು | ಜೆ.ಪಿ.ನಗರ ಪೊಲೀಸ್ ಠಾಣಾ ಅಧಿಕಾರಿಗಳು |
| ಸದಸ್ಯರುಗಳು | ವಾರ್ಡ್ 178 ರ UPHC ನ ವೈದ್ಯರು |
| ಸದಸ್ಯರುಗಳು | ಜೆ.ಪಿ.ನಗರ 2ನೇ ಹಂತ ನಾಗರೀಕ ಕಲ್ಯಾಣ ಸಂಘದ ಸದಸ್ಯರು ಹಾಗೂ ನಾಗರೀಕರು |
| ಸಾರ್ವಜನಿಕರು | ಮಾರ್ಷಲ್ |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- 14ನೇ ಮುಖ್ಯರಸ್ತೆ ಹಾಗೂ 21ನೇ ಮುಖ್ಯರಸ್ತೆ ಪಾದಚಾರಿ ಮಾರ್ಗದ ದುರಸ್ತಿ ಹಾಗೂ ಮೋರಿಯಲ್ಲಿ ಹೂಳೆತ್ತುವ ಕಾಮಗಾರಿಯನ್ನು ಕೈಗೊಳ್ಳುವಂತೆ ಕೋರಲಾಯಿತು. **ಕ್ರಮ : ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಜೆ.ಪಿ.ನಗರ ಉಪವಿಭಾಗ**

- 24ನೇ ಮುಖ್ಯರಸ್ತೆ ಹಾಗೂ 9ನೇ ಅಡ್ಡರಸ್ತೆ ಪಾದಚಾರಿ ಮಾರ್ಗದ ದುರಸ್ತಿ ಹಾಗೂ ಮೋರಿಯಲ್ಲಿ ಹೂಳೆತ್ತುವ ಕಾಮಗಾರಿಯನ್ನು ಕೈಗೊಳ್ಳುವಂತೆ ಕೋರಲಾಯಿತು. **ಕ್ರಮ : ರಸ್ತೆ ಮೂಲಭೂತ ಸೌಕರ್ಯ**

ಪು.ತಿ.ನೋ.

- "Litter Clearance Compaign" ಅನ್ನು ನಡೆಸುವುದರ ಬಗ್ಗೆ ಚರ್ಚಿಸಲಾಯಿತು. ಕ್ರಮ : **ಆರೋಗ್ಯ ಇಲಾಖೆ, ಜಯನಗರ**

- ಬ್ಲಾಕ್ ಸ್ಪಾಟ್ ನಿರ್ಮೂಲನೆ ಮಾಡಲು ಮಾರ್ಷಲ್‌ಗಳನ್ನು ನಿಯೋಜಿಸುವ ಬಗ್ಗೆ ಚರ್ಚಿಸಲಾಯಿತು. (18ನೇ ಎ ಮುಖ್ಯರಸ್ತೆ, 9ನೇ ಅಡ್ಡರಸ್ತೆ, 20ನೇ ಮುಖ್ಯರಸ್ತೆ) **ಕ್ರಮ : ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಎಸ್.ಡಬ್ಲ್ಯೂ.ಎಂ.**

- ರಸ್ತೆ ದಾಟಲು Pedestrian crossing ಅನ್ನು ಅಳವಡಿಸುವುದರ ಬಗ್ಗೆ ಚರ್ಚಿಸಲಾಯಿತು. (ಇದನ್ನು ಈಗಾಗಲೇ ಟ್ರಾಫಿಕ್ ಇಂಜಿನಿಯರಿಂಗ್ ಸೇಲ್ ಕಛೇರಿಗೆ ದಿನಾಂಕ 23-05-2022 ರಂದು ಪತ್ರವನ್ನು ಬರೆದು ಕಳುಹಿಸಲಾಗಿದೆ). **ಕ್ರಮ :ಟ್ರಾಫಿಕ್ ಇಂಜಿನಿಯರಿಂಗ್ ಸೇಲ್**

- 9ನೇ ಅಡ್ಡರಸ್ತೆ, 21ನೇ ಮುಖ್ಯರಸ್ತೆಯಲ್ಲಿ ಅನಿಯಂತ್ರಿತ ಸಂಚಾರ / ಅಸ್ತವ್ಯಸ್ತವಾಗಿರುವ ದೃಶ್ಯಗಳ ಬಗ್ಗೆ ಸಂಚಾರ ಪೊಲೀಸ್ ರವರೊಂದಿಗೆ ಚರ್ಚಿಸಲಾಯಿತು. **ಕ್ರಮ : ಜಯನಗರ ಸಂಚಾರ ಪೊಲೀಸ್ ಠಾಣೆ**

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 10.30 ಕ್ಕೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು. ಹಾಗೂ ಗೈರು ಹಾಜರಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಮಾನ್ಯ ಆಯುಕ್ತರವರಿಗೆ ಸೂಚಿಸಲಾಗುವುದೆಂದು ತಿಳಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಇಂಜಿನಿಯರ್‌ರಾದ ಶ್ರೀ ಅಶ್ವತ್‌ರಾಮನ್ .ಆರ್, ವಾರ್ಡ್ 178 ಸಾರಕ್ಕಿ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
**ಹಾಗೂ ವಾರ್ಡ್178 ರ ಸಹಾಯಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**